RNU AIR DHARWAD

# FEBRUARY 18, 2026
# AKASHAVANI - DHARWAD
# PRADESH SAAMACHARA (KANNADA) 12 PM

<><><>

**ಮೂರ್ಛೆ ರೋಗ, ಮರೆವಿನ ಕಾಯಿಲೆ, ಪಾರ್ಶ್ವವಾಯು** ಮತ್ತು ತಲೆನೋವಿನಂತಹ ನರ ವೈಜ್ಞಾನಿಕ ಕಾಯಿಲೆಗಳ ತಡೆ, ಆರಂಭಿಕ ಪತ್ತೆ ಹಾಗೂ ಸಮಗ್ರ ಚಿಕಿತ್ಸೆ ಎಂಬ ಮುಖ್ಯ ಗುರಿಯನ್ನಿರಿಸಿಕೊಂಡು, Karnataka Brain Health Initiative ಯೋಜನೆಯನ್ನು ಆರಂಭಿಸಿದೆ. ಈ ಯೋಜನೆಯನ್ವಯ ರಾಜ್ಯದ 33 ಜಿಲ್ಲಾ ಆಸ್ಪತ್ರೆಗಳಲ್ಲಿ ಮಿದುಳು ಆರೋಗ್ಯ ಕೇಂದ್ರಗಳನ್ನು ತೆರೆಯಲಾಗಿದೆ. ಜಿಲ್ಲಾ ಆಸ್ಪತ್ರೆಗಳಲ್ಲಿ ಬ್ರೈನ್ ಹೆಲ್ತ್ ಕ್ಲಿನಿಕ್ ಸ್ಥಾಪನೆ, ವೈದ್ಯರಿಗೆ ತರಬೇತಿ ಹಾಗೂ ಗ್ರಾಮೀಣ ಮಟ್ಟದಲ್ಲಿಯೇ ನರ ಸಂಬಂಧಿತ ಸಮಸ್ಯೆಗಳಿಗೆ ಚಿಕಿತ್ಸೆ ತಲುಪಿಸುವುದು ಪ್ರಮುಖ ಗುರಿಯಾಗಿದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ. ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮಾಹಿತಿ ಹಂಚಿಕೊಂಡಿರುವ ಅವರು, 2024ರ ಏಪ್ರಿಲ್‌ನಿಂದ 2025ರ ಡಿಸೆಂಬರ್ ವರೆಗೆ ಒಟ್ಟು ಸುಮಾರು 4.71 ಲಕ್ಷಕ್ಕೂ ಅಧಿಕ ತಪಾಸಣೆ ನಡೆಸಲಾಗಿದ್ದು, ಸುಮಾರು 1 ಲಕ್ಷದ 95 ಸಾವಿರ ನರರೋಗಿಗಳಿಗೆ ಚಿಕಿತ್ಸೆ ಒದಗಿಸಲಾಗಿದೆ. ಇದು ಸಾರ್ವಜನಿಕ ಆರೋಗ್ಯ ವ್ಯವಸ್ಥೆಯಲ್ಲಿ ಮಿದುಳು ಆರೋಗ್ಯ ಸೇವೆ ವಿಸ್ತರಣೆಗೆ ಮಹತ್ವದ ಸಾಧನೆಯಾಗಿದೆ ಎಂದಿದ್ದಾರೆ.

<><><>

**ಗದಗ ಜಿಲ್ಲೆಯ ಮೂಲಭೂತ** ಅವಶ್ಯಕತೆಗಳು, ಶಾಲೆಗಳಲ್ಲಿ ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಕುರಿತು ವಿವರವಾದ ಮಾಹಿತಿ ಕ್ರೋಡಿಕರಿಸಿ ಪ್ರಸ್ತಾವನೆ ಸಲ್ಲಿಸಲು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಯೋಜನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮ ಮಟ್ಟದಿಂದಲೇ ಯೋಜನೆಗಳನ್ನು ರೂಪಿಸುವ ಅವಕಾಶ ಗ್ರಾಮ ಸ್ವರಾಜ್ಯ ಹಾಗೂ ಪಂಚಾಯತ ರಾಜ್ ಕಾನೂನಿನಲ್ಲಿವೆ. ಈ ಕಾನೂನು ಸಮರ್ಪಕವಾಗಿ ಅನು ತ್ಠಾನವಾದಲ್ಲಿ ಗ್ರಾಮಗಳ ಅಭಿವೃದ್ಧಿ ಸಾಧ್ಯವಾಗಲಿದೆ ಎಂದರು. ವಿವಿಧ ಯೋಜನೆಗಳಡಿ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಸಂದರ್ಭದಲ್ಲಿ ಗ್ರಾಮಸಭೆ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡುವಂತಹ ಮಾದರಿ ಕಾರ್ಯವನ್ನು ಮಾಡಿದಲ್ಲಿ ಗ್ರಾಮಸಭೆಗೆ ಹೆಚ್ಚಿನ ಮಹತ್ವ ಬರುತ್ತದೆ ಎಂದು ಸಚಿವರು ಹೇಳಿದರು.

<><><>

**ಮಲಪ್ರಭಾ ಅಚ್ಚುಕಟ್ಟು ಪ್ರದೇಶದ ರೈತರ ಹಿತದೃಷ್ಟಿಯಿಂದ ಮಲಪ್ರಭಾ** ಜಲಾಶಯದ ಎಲ್ಲ ಕಾಲುವೆ ಮೂಲಕ ಕೃಷಿಗೆ ಹರಿಸಲಾಗುತ್ತಿರುವ ನೀರನ್ನು ಇದೇ 21 ವರೆಗೆ ಮುಂದುವರೆಸಲಾಗಿದೆ. ಪ್ರಸ್ತುತ ಜಲಾಶಯದ ನೀರಿನ ಮಟ್ಟ 2 ಸಾವಿರದ 61.20 ಅಡಿ ಇದ್ದು, ಕೇವಲ 14.166 ಟಿ.ಎಂ.ಸಿ. ಉಪಯುಕ್ತ ನೀರಿನ ಸಂಗ್ರಹವಿದೆ. ಪ್ರಸಕ್ತ ಲಭ್ಯವಿರುವ ನೀರನ್ನು ಮುಂಬರುವ ಜುಲೈ–2026 ರ ಅಂತ್ಯದವರೆಗಿನ ಕುಡಿಯುವ ನೀರಿನ ಅವಶ್ಯಕತೆಗಳಿಗೆ ಕಾಯ್ದಿರಿಸಬೇಕಾಗಿದೆ. ಜನವರಿ 31 ರಂದು ನೀಡಲಾದ ಮಾಹಿತಿಯಂತೆ ಜಲಾಶಯದ ಎಲ್ಲ ಕಾಲುವೆ ಮೂಲಕ ಕೃಷಿಗೆ ಹರಿಸಲಾಗುತ್ತಿರುವ ನೀರನ್ನು ಇದೇ 15 ರಂದು ಸ್ಥಗಿತಗೊಳಿಸಲಾಗುವುದು ಎಂದು ತಿಳಿಸಲಾಗಿತ್ತು. ಶಾಸಕರ ವಿನಂತಿ ಮೇರೆಗೆ ಅವಧಿ ವಿಸ್ತರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

<><><>

**ದ್ವಿತೀಯ ಪಿ.ಯು.ಸಿ ಪರೀಕ್ಷೆಯು** ಫೆಬ್ರವರಿ 28 ರಿಂದ ಮಾರ್ಚ್ 17 ರವರೆಗೆ ನಡೆಯಲಿದ್ದು, ಪರೀಕ್ಷಾ ಕೇಂದ್ರದಲ್ಲಿ ಪಾರದರ್ಶಕತೆ ಕಾಪಾಡುವುದರೊಂದಿಗೆ ಗೊಂದಲಗಳಿಗೆ ಆಸ್ಪದ ನೀಡದೇ ವಿದ್ಯಾರ್ಥಿಗಳು ಸುಗಮವಾಗಿ ಪರೀಕ್ಷೆ ಬರೆಯಲು ಅನುವು ಮಾಡಿಕೊಡಬೇಕು ಎಂದು ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಪ್ರಸಕ್ತ ಸಾಲಿನ ದ್ವಿತೀಯ ಪಿ.ಯು.ಸಿ ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ನಡೆಸುವ ಕುರಿತು ಉಡುಪಿಯಲ್ಲಿ ಆಯೋಜಿಸಲಾದ ಸಭೆಯಲ್ಲಿ ಮಾತನಾಡಿದ ಅವರು, ಸಾಮಾಜಿಕ ಜಾಲತಾಣಗಳ ಮೂಲಕ ಪ್ರಶ್ನೆ ಪತ್ರಿಕೆ ಸೋರಿಕೆ ಮಾಹಿತಿಯನ್ನು ಹಬ್ಬಿಸುವುದು ಅಥವಾ ನಕಲಿ ಪ್ರಶ್ನೆ ಪತ್ರಿಕೆ ಮೂಲಕ ಆರ್ಥಿಕ ಲಾಭಕ್ಕಾಗಿ ಸುಳ್ಳು ಸುದ್ದಿ ಹಬ್ಬಿಸುವುದು ಶಿಕ್ಷಾರ್ಹ ಅಪರಾಧವಾಗಿದೆ. ಇಂತಹ ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡಿದ್ದಲ್ಲಿ ಅಂತಹ ವ್ಯಕ್ತಿಗಳ ವಿರುದ್ಧ ಪೊಲೀಸ್ ಇಲಾಖೆ ಸೂಕ್ತ ಕ್ರಮಕೈಗೊಳ್ಳಬೇಕು ಎಂದರು.

**<><><>**

**ಧಾರವಾಡ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು** ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ನಾಳೆ ಬೆಳಗ್ಗೆ 11 ಗಂಟೆಗೆ ಧಾರವಾಡದ ಮರಾಠಾ ವಿದ್ಯಾ ಪ್ರಸಾರಕ ಮಂಡಳ, ಭಾರತ ಪ್ರೌಢಶಾಲಾ ಆವರಣದಲ್ಲಿ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ.

**<><><>**

**ಜಿಲ್ಲಾ ಪಂಚಾಯತ್ ಧಾರವಾಡ,** ಪಶು ಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆ ಧಾರವಾಡ, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಹಾಗೂ ಕರ್ನಾಟಕ ಪಶು ವೈದ್ಯಕೀಯ ಸಂಘ, ಜಿಲ್ಲಾ ಘಟಕ ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ಶ್ವಾನ ಪ್ರದರ್ಶನ –2026 ಹಾಗೂ ಬೃಹತ್ ಬೀದಿ ಶ್ವಾನ ಮರಿಗಳ ದತ್ತು ಪಡೆಯುವ ಕಾರ್ಯಕ್ರಮ ಇದೇ ತಿಂಗಳು 22 ರಂದು ಭಾನುವಾರ ಧಾರವಾಡದ ಕರ್ನಾಟಕ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ವಿವಿಧ ಆಕರ್ಷಕ ಶ್ವಾನ ತಳಿಗಳು ಭಾಗವಹಿಸಲಿದ್ದು, ತಳಿ ಹಾಗೂ ಲಿಂಗವಾರು ವರ್ಗೀಕರಿಸಿ ಉತ್ತಮ ಶ್ವಾನಗಳಿಗೆ ಆಕರ್ಷಕ ಬಹುಮಾನಗಳನ್ನು ನೀಡಲಾಗುವುದು. ದತ್ತು ಪಡೆಯಲ್ಪಡುವ ಎಲ್ಲಾ ಶ್ವಾನ ಮರಿಗಳಿಗೆ ಉಚಿತವಾಗಿ ಲಸಿಕೆ, ಜಂತುನಾಶಕ ಔಷಧಿ ಹಾಗೂ ಇತರೆ ಪರಿಕರಗಳನ್ನು ನೀಡುವುದರೊಂದಿಗೆ 1 ವರ್ಷದ ಒಳಗೆ ಸಂತಾನ ಹರಣ ಶಸ್ತ್ರ ಚಿಕಿತ್ಸೆ ಮಾಡಿಕೊಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 70222–98763 ಕ್ಕೆ ಸಂಪರ್ಕಿಸಲು ಧಾರವಾಡ ಪಶುಪಾಲನಾ ಮತ್ತು ಪಶು ವೈದ್ಯಸೇವಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><><>**

**ಕಲಬುರಗಿ ಜಿಲ್ಲೆಯಲ್ಲಿ ಕನ್ನಡದ ಕಹಳೆ** ಮೊಳಗಿಸಿ, ಸಾಹಿತ್ಯದ ಅಭಿರುಚಿ ಹೆಚ್ಚಿಸಿದ 22ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವು ಕೇವಲ ಒಂದು ಕಾರ್ಯಕ್ರಮವಾಗಿರದೆ, ಸಾಂಸ್ಕೃತಿಕ ಚಳುವಳಿಯಾಗಿ ಮಾರ್ಪಟ್ಟಿದೆ ಎಂದು ಸಾಹಿತ್ಯ ಸಮ್ಮೇಳನಾಧ್ಯಕ್ಷ ಮುಡುಬಿ ಗುಂಡೇರಾವ ಶ್ಲಾಘಿಸಿದ್ದಾರೆ. ಕಲಬುರಗಿಯ ಕನ್ನಡ ಭವನದ ಆವರಣದಲ್ಲಿರುವ ಬಾಪೂಗೌಡ ದರ್ಶನಾಪುರ ರಂಗಮಂದಿರದಲ್ಲಿ ಎರಡು ದಿನಗಳ ಕಾಲ ನಡೆದ ಜಿಲ್ಲಾ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**<><><>**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

**<><><>**